# ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಆಯುಕ್ತರವರ ಕಛೇರಿ, ಗ್ರಾ.ಕು.ನೀ.ನೈ.ಇ., 2ನೇ ಮಹಡಿ, 'ಇ' ಬ್ಲಾಕ್, ಕೆಹೆಚ್‌ಬಿ ಕಟ್ಟಡ,
ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560009 - ದೂರವಾಣಿ: 080-22240508 : ಫ್ಯಾಕ್ಸ್: 080-22240509
ಈಮೇಲ್: krwssd@gmail.com

ಸಂಖ್ಯೆ ಗ್ರಾಅಪ/133/ಗ್ರಾನೀಸ(4)2015 ದಿನಾಂಕ: 30-03-2016

**ಪ್ರಥಮ ಆಧ್ಯತೆ**

ರವರಿಗೆ

1. ರಾಜ್ಯದ ಎಲ್ಲಾ (30) ಜಿಲ್ಲಾ ಪಂಚಾಯತ್‌ಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

2. ಮುಖ್ಯ ಅಭಿಯಂತರರು
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ
1ನೇ ಮಹಡಿ, "E" Block , KHB Complex,
ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು -09.

ಮಾನ್ಯರೆ,

ವಿಷಯ: ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಬಳಕೆ ಮಾಡಲು ಮಾರ್ಗಸೂಚಿಗಳನ್ನು ಹೊರಡಿಸುವ ಕುರಿತು.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 133 ಗ್ರಾನೀಸ(2) 2015, ದಿನಾಂಕ: 19.03.2016.
2. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 133 ಗ್ರಾನೀಸ (4) 2015 ದಿನಾಂಕ: 21.03.2016.

ಉಲ್ಲೇಖ(2)ರ ಸರ್ಕಾರದ ಪತ್ರದಲ್ಲಿ ದಿನಾಂಕ:24.03.2016ರೊಳಗಾಗಿ ಟಾಸ್ಕ್‌ಫೋರ್ಸ್ ಸಮಿತಿ ಸಭೆಯನ್ನು ನಡೆಸಿ ಕಾಮಗಾರಿಗಳನ್ನು ಆಯ್ಕೆ ಮಾಡಿ ದಿನಾಂಕ:28.03.2016ರೊಳಗೆ IMISನಲ್ಲಿ ಇಂಧೀಕರಿಸಿ ಅಗತ್ಯ ಕ್ರಮ ಜರುಗಿಸಲು ಸೂಚಿಸಲಾಗಿದೆ. ಆದರೆ ನಿನ್ನೆ ಸಂಜೆಯವರೆಗೆ ಪರಿಶೀಲನೆ ನಡೆಸಿದಾಗ ರಾಜ್ಯದ ಯಾವುದೇ ಜಿಲ್ಲೆಗಳಿಂದ ಈ ಕಾರ್ಯ ಆಗಿರುವುದಿಲ್ಲ. ಕುಡಿಯುವ ನೀರಿನ ಬವಣೆ ನೀಗಿಸುವಂತಹ ಕಾರ್ಯ ಅತ್ಯಂತ ಪ್ರಮುಖವಾಗಿದ್ದು ಅನಗತ್ಯ ವಿಳಂಬ ಮಾಡುವುದು ಸರಿಯಲ್ಲ. ವಿಶೇಷವಾಗಿ ಮಳೆಯ ಕೊರತೆಯಿಂದಾಗಿ ಉಲ್ಬಣವಾಗಿರುವ ಕುಡಿಯುವ ನೀರಿನ ಬವಣೆಯನ್ನು ತಪ್ಪಿಸಲು ಈ ವಿಶೇಷ ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, ವಿಳಂಬ ಮಾಡದೇ ಕೂಡಲೇ ಕಾರ್ಯ ಪ್ರವೃತ್ತರಾಗಿ ಸಂಬಂಧಿಸಿದವರಿಗೆ ಅಗತ್ಯ ಸೂಚನೆ ಹೊರಡಿಸಿ ಕಾಮಗಾರಿಗಳ ಪಟ್ಟಿಯನ್ನು ಈಗಾಗಲೇ ನೀಡಿರುವ ಸೂಚನೆಯನ್ವಯ ಸಿದ್ಧಪಡಿಸಿ ತಕ್ಷಣವೇ IMIS ನಲ್ಲಿ ಇಂದೀಕರಿಸಿ Hard Copyಯನ್ನು ಈ ಕಛೇರಿಗೆ ಸಲ್ಲಿಸಲು ತಿಳಿಸಿದೆ. ಈ ವಿಚಾರದಲ್ಲಿ ಅನಗತ್ಯ ವಿಳಂಬ ಮಾಡುವುದಿಲ್ಲ ಎಂಬುದಾಗಿ ಆಶಿಸುತ್ತೇನೆ.

ತಮ್ಮ ವಿಶ್ವಾಸಿ,
30/3/16
(ಎಂ. ಮಂಜುನಾಥ ನಾಯಕ್)
ಆಯುಕ್ತರು ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿಗಳು
ಗ್ರಾ.ಕು.ನೀ ಮತ್ತು ನೈ.ಇ

ಪ್ರತಿಯನ್ನು:
1. ರಾಜ್ಯದ ಎಲ್ಲಾ (4) ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತಗಳು ರವರುಗಳ ಮಾಹಿತಿಗಾಗಿ ಮತ್ತು ಮುಂದಿನ ಜರೂರು ಕ್ರಮಕ್ಕಾಗಿ ಕಳುಹಿಸಿದೆ.
2. ರಾಜ್ಯದ ಎಲ್ಲಾ (30) ಕಾರ್ಯಪಾಲಕ ಇಂಜಿನಿಯರ್‌ಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳ ಮಾಹಿತಿಗಾಗಿ ಮತ್ತು ಮುಂದಿನ ಜರೂರು ಕ್ರಮಕ್ಕಾಗಿ ಕಳುಹಿಸಿದೆ.
3. ರಾಜ್ಯದ ಎಲ್ಲಾ (176) ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಯವರುಗಳ ಮಾಹಿತಿಗಾಗಿ ಮತ್ತು ಸೂಕ್ತ ಜರೂರು ಕ್ರಮಕ್ಕಾಗಿ ಕಳುಹಿಸಿದೆ.